# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ಸಂಖ್ಯೆ: ಇಡಿ/ಕೆಇಎ/ಪಿಜಿನೀಟ್-2023 ದಿನಾಂಕ: 10-08-2023

**ಪಿಜಿನೀಟ್-2023- ಪಿಜಿ ವೈದ್ಯಕೀಯ ಮತ್ತು ಪಿಜಿ ದಂತವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಸಲು ಮತ್ತೊಮ್ಮೆ ದಿನಾಂಕ ವಿಸ್ತರಣೆ (11-08-2023 ಮ. 2.00 ರಿಂದ 13-08-2023 ಸಂಜೆ 6.00 ರ ವರೆಗೆ)**

ಪಿಜಿ ವೈದ್ಯಕೀಯ ಮತ್ತು ಪಿಜಿ ದಂತವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗೆ ನೊಂದಣಿ ಮಾಡಿ ಅರ್ಜಿ ಸಲ್ಲಿಸಲು ದಿನಾಂಕ 26-07-2023 ರಿಂದ 31-07-2023 ರ ವರೆಗೆ ಹಾಗು 02-08-2023 ರಿಂದ 03-08-2023 ವರೆಗೆ ಸಾಕಷ್ಟು ಕಾಲಾವಕಾಶ ನೀಡಲಾಗಿರುತ್ತದೆ. ಆದಾಗ್ಯು ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶ ಕೋರಿರುವ ಹಿನ್ನಲೆಯಲ್ಲಿ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಕರ್ನಾಟಕದಲ್ಲಿನ ಪಿಜಿ ವೈದ್ಯಕೀಯ ಮತ್ತು ಪಿಜಿ ದಂತವೈದ್ಯಕೀಯ ಕೋರ್ಸುಗಳ 2023ನೇ ಸಾಲಿನ ಪ್ರವೇಶಕ್ಕೆ ಅರ್ಹತೆ ಪಡೆಯಲು ಅರ್ಜಿ ಸಲ್ಲಿಸಲು ಪಿಜಿನೀಟ್ – 2023 / ನೀಟ್ ಎಂಡಿಎಸ್ 2023 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಅಂತಿಮ ಅವಕಾಶವನ್ನು ನೀಡಲಾಗಿದೆ.

ಪಿಜಿನೀಟ್ – 2023 / ನೀಟ್ ಎಂಡಿಎಸ್ 2023 ರಲ್ಲಿ ಅರ್ಹತೆ ಪಡೆದಿರುವ ಆದರೆ ಇಲ್ಲಿಯವರೆಗೆ ನೊಂದಣಿಯನ್ನು ಮಾಡದೆ ಇರುವ ಆಸಕ್ತ ಅರ್ಹ ಅಭ್ಯರ್ಥಿಗಳು 11-08-2023 ಮ. 2.00 ರಿಂದ 13-08-2023 ಸಂಜೆ 6.00 ರ ವರೆಗೆ ಆನ್‌ಲೈನ್ ಮೂಲಕ ನೊಂದಣಿ ಮಾಡಿ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸಬಹುದಾಗಿರುತ್ತದೆ. ಪಿಜಿನೀಟ್ – 2023 / ನೀಟ್ ಎಂಡಿಎಸ್ 2023 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ಪಿಜಿವೈದ್ಯಕೀಯ / ಪಿಜಿದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ನೊಂದಣಿ ಮಾಡಿಕೊಳ್ಳಲು ಅರ್ಹರಿರುತ್ತಾರೆ. (ಸೇವಾನಿರತ ಅಭ್ಯರ್ಥಿಗಳೂ ಸೇರಿದಂತೆ)

ನೊಂದಣಿ ಮಾಡಿ ಅರ್ಜಿ ಸಲ್ಲಿಸುವಿಕೆಯನ್ನು ಪೂರ್ಣ ಮಾಡದೇ ಇರುವ ಅಭ್ಯರ್ಥಿಗಳೂ ಸಹ ಅರ್ಜಿಯನ್ನು ಪೂರ್ಣವಾಗಿ ಭರ್ತಿಮಾಡಿ ಶುಲ್ಕವನ್ನು ಪಾವತಿಸಬಹುದಾಗಿದೆ.

ಪಿಜಿನೀಟ್-2023ಕ್ಕೆ ಆನ್‌ಲೈನ್ ಮೂಲಕ ನೊಂದಣಿ ಮಾಡಲು ಮತ್ತು ಅರ್ಜಿ ಸಲ್ಲಿಸಲು ಮತ್ತೊಮ್ಮೆ ದಿನಾಂಕವನ್ನು ವಿಸ್ತರಣೆ ಮಾಡುವುದಿಲ್ಲ. ಪಿಜಿನೀಟ್-2023 ಪ್ರವೇಶ ಪ್ರಕ್ರಿಯೆ ಕುರಿತು ಹೆಚ್ಚಿನ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟಿನಿಂದ ಪಡೆಯಬಹುದಾಗಿದೆ.

ಈ ಮೇಲಿನ ದಿನಾಂಕಗಳಂದು ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಿಗದಿತ ದಿನಾಂಕಗಳಂದು ಮೂಲ ದಾಖಲೆಗಳ ಪರಿಶೀಲನೆಗೆ ಅಗತ್ಯವಿರುವ ಎಲ್ಲಾ ಮೂಲ ದಾಖಲೆಗಳೊಂದಿಗೆ ಹಾಜರಾಗಬೇಕು.

ಅಭ್ಯರ್ಥಿಗಳಿಗೆ ವೈಯಕ್ತಿಕವಾಗಿ ಮಾಹಿತಿಯನ್ನು ಕಳುಹಿಸಲಾಗುವುದಿಲ್ಲ.

NOTE

1) PGNEET-2023 cut-off as per NBE notice dated 14-03-2023
   a. For General - cut-off score = 291
   b. For SC / ST / 2A /2B/3A/3B/Cat-1 -cut-off score = 257 (only for Karnataka candidates)
2) NEET MDS 2023 cut-off as per NBE notice dated 10-03-2023
   a. For General – cut-off score = 272
   b. For SC / ST / 2A /2B/3A/3B/Cat-1 -cut-off score = 238 (only for Karnataka candidates)

Candidates who have scored less than the cut-off score prescribed by PGNEET-2023 or NEET-MDS 2023 are not be eligible.

ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ NEET-PG 2023/NEET-MDS 2023 ರಲ್ಲಿ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50th Percentile) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗು ಪ್ರವೇಶಕ್ಕಾಗಿ ನೊಂದಣಿಯನ್ನು ಮಾಡಿ ಕೊಳ್ಳಬಹುದಾಗಿದೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು.

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in